ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆಸಂಖ್ಯೆ	:	**442**
ಸದಸ್ಯರ ಹೆಸರು	:	ಶ್ರೀ ಬಿ.ಜಿ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	15-09-2021
ಉತ್ತರಿಸುವ ಸಚಿವರು	:	ಮಾನ್ಯ ಕಂದಾಯ ಸಚಿವರು

ಪ್ರಶ್ನೆ		ಉತ್ತರ
(ಅ)	ಕಲಬುರಗಿ ಜಿಲ್ಲೆಯ ಚಿಂಚೋಳಿ ತಾಲ್ಲೂಕಿನ ಗಡಿಕೇಶ್ವಾರ ಗ್ರಾಮ ಮತ್ತು ಸೇಡಂ ತಾಲ್ಲೂಕಿನ ಕೆಲವು ಗ್ರಾಮಗಳಲ್ಲಿ ಪದೇ ಪದೇ ಲಘು ಭೂಕಂಪನ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
(ಆ)	ಮೇಲ್ಕಂಡ ತಾಲ್ಲೂಕುಗಳ ಜನರು ಸದಾ ಭಯ, ಆತಂಕದಿಂದಲೇ ಕಾಲ ಕಳೆಯುತ್ತಿರುವುದರಿಂದ ಜನರ ಆತಂಕವನ್ನು ದೂರ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು;(ವಿವರ ನೀಡುವುದು)	ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ (ಕೆಎಸ್ಎನ್‌ಡಿಎಂಸಿ) ವೈಜ್ಞಾನಿಕ ಸಿಬ್ಬಂದಿಗಳು, ಗಣಿ ಮತ್ತು ಭೂವಿಜ್ಞಾನ ಇಲಾಖೆ, ಹಾಗೂ ಅಂತರ್ಜಲ ಇಲಾಖೆಯ ಅಧಿಕಾರಿಗಳು ಮತ್ತು ಸಂಬಂಧಿಸಿದ ಪರಿಣಿತರ ತಂಡದಿಂದ ಕಲಬುರಗಿ ಜಿಲ್ಲೆಯ ಚಿಂಚೋಳಿ ತಾಲ್ಲೂಕಿನ ಗಡಿಕೇಶ್ವಾರ ಗ್ರಾಮ ಮತ್ತು ಸೇಡಂ ತಾಲ್ಲೂಕಿನ ಕೆಲವು ಗ್ರಾಮಗಳಲ್ಲಿ ಆಗಾಗ್ಗೆ ಲಘು ಭೂಕಂಪನ ಆಗುತ್ತಿರುವ ಕುರಿತು ಪರೀಶೀಲನೆ ನಡೆಸಿ, ಸಂಬಂಧಪಟ್ಟ ಗ್ರಾಮದ/ಸ್ಥಳಿಯ ಜನರೊಂದಿಗೆ ಸಂವಾದ ಕಾರ್ಯಕ್ರಮಗಳನ್ನು ಕೈಗೊಂಡು ಲಘು ಭೂಕಂಪನದ ಕಾರಣಗಳು ಹಾಗೂ ವಿವರಣೆಗಳನ್ನು ನೀಡಿ, ಲಘು ಭೂಕಂಪನದ ಬಗ್ಗೆ ಆತಂಕ ಹಾಗೂ ಭಯಗೊಳ್ಳುವ ಅವಶ್ಯಕತೆ ಇಲ್ಲವೆಂದು ಮನದಟ್ಟು ಮಾಡಲಾಗಿದೆ ಹಾಗೂ ಲಘು ಭೂಕಂಪನ ಸಂದರ್ಭಗಳಲ್ಲಿ ಕೈಗೊಳ್ಳಬೇಕಾದ ಕಾರ್ಯಗಳನ್ನು ತಿಳಿಸಲಾಗಿದೆ.
(ಇ)	ಸಂಬಂಧಪಟ್ಟ ಅಧಿಕಾರಿಗಳು ಭೂಕಂಪನ ಆಗುತ್ತಿರುವ ಸ್ಥಳಗಳಿಗೆ ತೆರಳಿ ಭೂಕಂಪನದ ತೀವ್ರತೆಯನ್ನು ಪರಿಶೀಲಿಸಿದ್ದಾರೆಯೇ? (ಪರಿಶೀಲಿಸಿದ್ದಲ್ಲಿ, ಎಷ್ಟು ಪ್ರಮಾಣದ ಭೂಕಂಪನವಾಗಿದೆ ಎಂಬುದರ ವಿವರ ನೀಡುವುದು)	ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ವೈಜ್ಞಾನಿಕ ಸಿಬ್ಬಂದಿಗಳು, ಗಣಿ ಮತ್ತು ಭೂವಿಜ್ಞಾನ ಇಲಾಖೆ, ಬೆಂಗಳೂರು ಹಾಗೂ ಅಂತರ್ಜಲ ಇಲಾಖೆಯ ಅಧಿಕಾರಿಗಳು ಮತ್ತು ಸಂಬಂಧಿಸಿದ ಪರಿಣಿತರ ತಂಡದಿಂದ ಪರೀಶೀಲನೆ ಕೈಗೋಳ್ಳಲಾಗಿದೆ. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರವು ಶರಣಸಿರಸಣಗಿ ಗ್ರಾಮದಲ್ಲಿ ಅಳವಡಿಸಿರುವ ಶಾಶ್ವತ ಭೂಕಂಪನ ಮಾಪನ ಕೇಂದ್ರದಲ್ಲಿ ಇಲ್ಲಿಯವರೆಗೆ ಯಾವುದೇ ರೀತಿಯ ಲಘು ಭೂಕಂಪನಗಳು ದಾಖಲಾಗಿರುವುದು ಕಂಡುಬಂದಿರುವುದಿಲ್ಲ. ಈ ಮಾಹಿತಿಯನ್ನು ಸ್ಥಳೀಯ ಅಧಿಕಾರಿಗಳು ಹಾಗೂ ಜನಸಾಮಾನ್ಯರ ಗಮನಕ್ಕೆ ತರಲಾಗಿದ್ದು, ಸ್ಥಳೀಯರು ಧೈರ್ಯದಿಂದ ಇರುವಂತೆ ತಿಳಿಸಲಾಗಿದೆ.

ಕಂಇ 395 ಟಿಎನ್‌ಆರ್ 2021

(ಆರ್.ಅಶೋಕ)
ಕಂದಾಯಸಚಿವರು